ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನಸಭೆ ಪ್ರಶ್ನೋತ್ತರ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ

ದಿನಾಂಕ : DATE : 05/03/2020

# ರೌಡಿಗಳನ್ನು ಧರ್ಮದಾತರು, ನ್ಯಾಯದಾತರೆನ್ನಬೇಕು

## ವಿಧಾನಸಭೆಯಲ್ಲಿ ಸಂವಿಧಾನ ಕುರಿತ ಚರ್ಚೆ ವೇಳೆ ಕೆ.ಆರ್. ರಮೇಶ್‌ಕುಮಾರ್ ವ್ಯಂಗ್ಯ

• **ಕನ್ನಡಪ್ರಭ ವಾರ್ತೆ** ವಿಧಾನಸಭೆ

5/3/20

ರಾಜ್ಯದಲ್ಲಿ ನ್ಯಾಯಾಲಯಗಳಿಗಿಂತ ರೌಡಿಗಳೇ ತಮ್ಮ ಬಳಿ ಬರುವ ಸಾರ್ವಜನಿಕರ ಪ್ರಕರಣಗಳನ್ನು ಶೀಘ್ರ ವಿಚಾರಣೆ ನಡೆಸಿ ತೀರ್ಪು ನೀಡುತ್ತಿದ್ದಾರೆ. ಜತೆಗೆ ಅನುಷ್ಠಾನಕ್ಕೂ ತರುತ್ತಿದ್ದಾರೆ. ಇಂತಹವರನ್ನು ರೌಡಿಗಳು ಎಂದು ಅಗೌರವ ತೋರದೆ 'ಧರ್ಮದಾತರು' ಅಥವಾ 'ನ್ಯಾಯದಾತರು' ಎಂದು ಸಂಬೋಧಿಸಬೇಕು ಎಂಬ 'ಬೇಡಿಕೆ' ಬುಧವಾರ ವಿಧಾನಸಭೆಯಲ್ಲಿ ವ್ಯಕ್ತವಾಗಿದೆ.

ವಿಧಾನಸಭೆಯಲ್ಲಿ ಬುಧವಾರ ನಡೆದ ಸಂವಿಧಾನದ ಕುರಿತ ಚರ್ಚೆಯಲ್ಲಿ ನ್ಯಾಯಾಂಗ ವ್ಯವಸ್ಥೆ ಬಗೆಗಿನ ಚರ್ಚೆ ವೇಳೆ ರೌಡಿಗಳು ಹಾಗೂ ಸೆಟಲ್‌ಮೆಂಟ್‌ಗಳ ಬಗ್ಗೆ ಸ್ವಾರಸ್ಯಕರ ಚರ್ಚೆ ನಡೆಯಿತು.

ಕಾಂಗ್ರೆಸ್ ಶಾಸಕ ಎಚ್.ಕೆ.ಪಾಟೀಲ್ ಅವರು, ನ್ಯಾಯಾಲಯದಲ್ಲಿ ಪ್ರಕರಣಗಳ ವಿಲೇವಾರಿ ವಿಳಂಬವಾಗುತ್ತಿದೆ. ನ್ಯಾಯಾಧೀಶರ ನೇಮಕ ಸಮರ್ಪಕವಾಗಿ ಆಗುತ್ತಿಲ್ಲ. ಶೇ.30 ಪ್ರಕರಣಗಳಲ್ಲಿ ಸರ್ಕಾರವೇ ಪ್ರತಿವಾದಿಯಾಗಿರುತ್ತದೆ. ಸರ್ಕಾರ 50 ಸಾವಿರ ಪ್ರಕರಣಗಳಲ್ಲಿ ನ್ಯಾಯಾಲಯ ಆದೇಶ ಪಾಲನೆ ಮಾಡಿಲ್ಲ. ನ್ಯಾಯಾಂಗ ಹಾಗೂ ಕಾರ್ಯಾಂಗ ವ್ಯವಸ್ಥೆಯಲ್ಲಿನ ಲೋಪಗಳಿಂದಾಗಿ ಜನರು ಸಿವಿಲ್ ವ್ಯಾಜ್ಯಗಳನ್ನು ರಾಜಕಾರಣಿಗಳು, ಪೊಲೀಸರು ಹಾಗೂ ರೌಡಿಗಳ ಬಳಿ ಕೊಂಡೊಯ್ಯುತ್ತಿದ್ದಾರೆ.

ರೌಡಿಗಳು ತಕ್ಷಣವೇ ವಿಚಾರಣೆ ನಡೆಸಿ ತೀರ್ಪು ನೀಡುತ್ತಾರೆ ಎಂದು ಅಭಿಪ್ರಾಯಪಟ್ಟರು.

**ರೌಡಿಗಳಲ್ಲ ನ್ಯಾಯದಾತರು!:** ಈ ವೇಳೆ ಮಾಜಿ ಸ್ಪೀಕರ್ ಕೆ.ಆರ್. ರಮೇಶ್‌ಕುಮಾರ್, ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತಿರುವವರನ್ನು ರೌಡಿಗಳು ಎಂದು ಕರೆಯುವುದು ಸರಿಯಲ್ಲ. ಗೌರವಯುತವಾಗಿ ರಿಯಲ್ ಎಸ್ಟೇಟ್ ಏಜೆಂಟ್, ಧರ್ಮದಾತರು, ನ್ಯಾಯದಾತರು ಎಂದು ಸಂಬೋಧಿಸಬೇಕು. ನಮ್ಮೆಲ್ಲರ ಪರವಾಗಿಯೇ ಕೆಲಸ ಮಾಡುತ್ತಿದ್ದಾರೆ ಎಂದು ವ್ಯಂಗ್ಯ ದಾಟಿಯಲ್ಲಿ ಮನವಿ ಸಲ್ಲಿಸಿದರು.

ಇದಕ್ಕೆ ಪೂರಕವಾಗಿ ಸಚಿವ ಜೆ.ಸಿ. ಮಾಧುಸ್ವಾಮಿ, ನೀವು ಹೇಳುತ್ತಿರುವುದು ಸತ್ಯ. ರೌಡಿಗಳ ಬಳಿ ಹೋದರೆಯೇ ಬೇಗ ಪ್ರಕರಣಗಳ ವಿಲೇವಾರಿಯಾಗುತ್ತದೆ. ನ್ಯಾಯಾಲಯಗಳಿಂದ ಬೇಗ ತೀರ್ಪು ಸಿಗದಿರುವುದರಿಂದ ಜನರು ಹೆಚ್ಚಾಗಿ ರೌಡಿಗಳ ಬಳಿಗೆ ಹೋಗುತ್ತಿದ್ದಾರೆ ಎಂದರು.

## ಅಂಬೇಡ್ಕರ್ ಗೆಲ್ಲಿಸದ್ದು ಕಾಂಗ್ರೆಸ್ ತಪ್ಪು



ವಿಧಾನಸಭೆ: ದೇಶದ ಸ್ವಾತಂತ್ರ್ಯಾನಂತರ ನಡೆದ ಸಾರ್ವತ್ರಿಕ ಚುನಾವಣೆಯಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರನ್ನು ಮುಂಚೂಣಿಗೆ ತಂದು ಕಾಂಗ್ರೆಸ್ ಪಕ್ಷ ಗೆಲ್ಲಿಸಬೇಕಿತ್ತು. ಅದು ಆಗಲಿಲ್ಲ. ಈ ತಪ್ಪು ಕಾಂಗ್ರೆಸ್ ಪಕ್ಷದಿಂದ ನಡೆದಿದೆ. ತಪ್ಪು ಯಾರು ಮಾಡಿದರೂ ತಪ್ಪೇ ಎಂದು ಮಾಜಿ ಸ್ಪೀಕರ್ ಕೆ.ಆರ್. ರಮೇಶ್ ಕುಮಾರ್ ಬುಧವಾರ ವಿಧಾನಸಭೆಯಲ್ಲಿ ಹೇಳಿದರು. ಸಂವಿಧಾನ ಕುರಿತ ವಿಶೇಷ ಚರ್ಚೆಯಲ್ಲಿಪಾಲ್ಗೊಂಡುಮಾತನಾಡಿದ ರಮೇಶ್ ಕುಮಾರ್ ಅವರು ಅಟಲ್ ಬಿಹಾರಿ ವಾಜಪೇಯಿ ಅವರು ಕೇವಲ ಬಿಜೆಪಿಗೆ ಸೀಮಿತವಲ್ಲ. ಅವರು ಇಡೀ ದೇಶದ ಆಸ್ತಿ. ಭಗತ್ ಸಿಂಗ್ ನನ್ನ ರೋಲ್ ಮಾಡೆಲ್ ಎಂದು ಹೇಳಿದರು. ಈ ವೇಳೆ ಆಡಳಿತ ಪಕ್ಷದ ಸದಸ್ಯರು ಮೇಜು ತಟ್ಟಿ ಸ್ವಾಗತಿಸಿದರು.